ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 4-8-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಸ್ತ್ರೀವಾದಿ ತಾತ್ವಿಕತೆಯ ವಿಭಿನ್ನ ನೆಲೆಗಳು ಕುರಿತ ಸಮಾವೇಶ ಉದ್ಘಾಟನಾ ಸಮಾರಂಭ.<br><br>ಉದ್ಘಾಟನೆ:<br><br>ಡಾ.ಸಬಿಹಾ ಭೂಮೀಗೌಡ, ಕುಲಪತಿಗಳು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ<br><br>ಮುಖ್ಯ ಅತಿಥಿಗಳು:<br><br>ಶ್ರೀಮತಿ ಸಿ.ಜಿ. ಮಂಜುಳಾ,<br>ಸಹ ಸಂಪಾದಕರು,<br>ಪ್ರಜಾವಾಣಿ<br><br>ಅಧ್ಯಕ್ಷತೆ:<br><br>ಪ್ರೊ. ಮಾಲತಿ ಪಟ್ಟಣಶೆಟ್ಟಿ,<br>ಅಧ್ಯಕ್ಷರು,<br>ಕರ್ನಾಟಕ ಸಾಹಿತ್ಯ ಅಕಾಡೆಮಿ. | 05-08-2016<br>ಶುಕ್ರವಾರ<br>ಬೆಳಿಗ್ಗೆ<br>10-30 ಗಂಟೆಗೆ | ರವೀಂದ್ರ ಕಲಾಕ್ಷೇತ್ರ,<br>ಜೆ.ಸಿ. ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ತರಬೇತಿ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

**2016–17 ನೇ ಸಾಲಿಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ತರಬೇತಿ ಕಾರ್ಯಕ್ರಮಗಳನ್ನು ಜಿ.ಟಿ.ಟಿ.ಸಿ ಕೇಂದ್ರದ ಮೂಲಕ ವಿವಿಧ ಕೋರ್ಸ್‌ಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**ಇತ್ತೀಚಿನ ಜಾತಿ ಪ್ರಮಾಣ ಪತ್ರ, ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳು, ಆಧಾರ ಪತ್ರ/ವಾಸದ ದೃಢೀಕರಣ ಪತ್ರ/ವೋಟರ್ ಐಡಿ ಹಾಗೂ 4 ಪಾಸ್‌ಪೋರ್ಟ್ ಅಳತೆಯ ಫೋಟೋಗಳೊಂದಿಗೆ ಆಗಸ್ಟ್ 20 ರೊಳಗಾಗಿ ಅರ್ಜಿಗಳನ್ನು ಪಡೆದು ಸಲ್ಲಿಸುವುದು.**

**ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಆಯಾ ತಾಲ್ಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿ ಅಥವಾ ಜಿ.ಟಿ.ಟಿ.ಸಿ, ರಾಜಾಜಿನಗರ, ಬೆಂಗಳೂರು ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು. 72591 61522, 94488 44948.**

ಬಾಬು:ಜಿಪಿಆರ್.

## ಬೆಳ್ಳಿಹೆಜ್ಜೆಯಲ್ಲಿ ಹಿರಿಯ ತಾರೆ ಲಕ್ಷ್ಮೀ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

**ಕರ್ನಾಟಕ ಚಲನಚಿತ್ರ ಅಕಾಡೆಮಿಯು ಆಗಸ್ಟ್ 7 ರ ಶನಿವಾರದಂದು ಸಂಜೆ 5–00 ಗಂಟೆಗೆ ಬೆಂಗಳೂರಿನ ಕುಮಾರ ಕೃಪಾ ರಸ್ತೆಯ ಗಾಂಧೀ ಭವನದಲ್ಲಿರುವ ಮಹದೇವ ದೇಸಾಯಿ ಸಭಾಂಗಣದಲ್ಲಿ ಹಿರಿಯ ಚತುರ್ಭಾಷಾ ತಾರೆ ಶ್ರೀಮತಿ ಲಕ್ಷ್ಮೀ ಅವರ ಬೆಳ್ಳಿಹೆಜ್ಜೆ ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.**

**ಮುಖ್ಯ ಅತಿಥಿಗಳಾಗಿ ಕನ್ನಡ ಚಲನಚಿತ್ರ ನಟರಾದ ಪುನೀತ್ ರಾಜ್‌ಕುಮಾರ್, ಜೈ ಜಗದೀಶ್, ಚಲನಚಿತ್ರ ನಿರ್ದೇಶಕ ಎಸ್.ಕೆ. ಭಗವಾನ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಸಾ.ರಾ. ಗೋವಿಂದು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳುವರು. ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಳ್ಳಿಹೆಜ್ಜೆ ಕಾರ್ಯಕ್ರಮದಲ್ಲಿ ಶ್ರೀಮತಿ ಲಕ್ಷ್ಮೀಯವರನ್ನು ಕುರಿತಾದ ಛಾಯಾಚಿತ್ರ ಪ್ರದರ್ಶನ ಹಾಗೂ ಸಾಕ್ಷ್ಯಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.**

ಬಾಬು:ಜಿಪಿಆರ್.

# ಡಿ. ದೇವರಾಜ ಅರಸು ಶತಮಾನೋತ್ಸವ ಸಮಾರೋಪ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ ಹಾಗೂ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಆಗಸ್ಟ್ 20 ರಂದು ಆಚರಿಸಲಾಗುತ್ತಿದ್ದು, ಅಂದು ಬೆಳಿಗ್ಗೆ 10.30 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಡಿ. ದೇವರಾಜ ಅರಸು ಪ್ರತಿಮೆಗೆ ಮಾಲಾರ್ಪಣೆ ಹಾಗೂ 11.00 ಗಂಟೆಗೆ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಸಾರ್ವಜನಿಕ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿಗಳು ಮತ್ತು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಸೇರಿದಂತೆ ಇತರ ಸಚಿವರು ಹಾಗೂ ಗಣ್ಯವ್ಯಕ್ತಿಗಳು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಬಾಬು:ಜಿಪಿಆರ್.

# ಅವಧಿ ವಿಸ್ತರಣೆ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

2016 ರ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಎಲ್ಲಾ ವರ್ಗದ ರೈತರಿಗೆ ವಿಮಾ ಕಂತು ಕಟ್ಟಿ ಯೋಜನೆಯಲ್ಲಿ ಪಾಲ್ಗೊಳ್ಳಲು ಕೊನೆಯ ದಿನಾಂಕವನ್ನು ಆಗಸ್ಟ್ 10 ರವರೆಗೂ ವಿಸ್ತರಿಸಲಾಗಿದೆ.

ಬಾಬು:ಜಿಪಿಆರ್.

# ಸಚಿವರ ಸಂತಾಪ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

ನಾಡಿನ ಪ್ರಖ್ಯಾತ ನೀರಾವರಿ ತಜ್ಞ, ದಕ್ಷ ಆಡಳಿತಗಾರ ಹಾಗೂ ಕೇಂದ್ರ ಸರ್ಕಾರದ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಶ್ರೀ ಕೆ.ಸಿ. ರೆಡ್ಡಿಯವರ ನಿಧನಕ್ಕೆ ರಾಜ್ಯ ಜಲಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಬಾಬು:ಜಿಪಿಆರ್.

# ಲಾವಣ್ಯಗೆ ಪಿ.ಎಚ್.ಡಿ. ಪದವಿ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

ಮೈಸೂರು ವಿಶ್ವ ವಿದ್ಯಾನಿಲಯವು ಡಾ. ಶಾಂತ ನಾಯ್ಕ್ ಎನ್. ಅವರ ಮಾರ್ಗದರ್ಶನದಲ್ಲಿ ಲಾವಣ್ಯ ಸಿ. ಅವರು ಆಂಗ್ಲ ಭಾಷೆಯಲ್ಲಿ ಸಂಶೋಧನೆ ನಡೆಸಿದ ಮಹಾ ಪ್ರಬಂಧವನ್ನು ಪಿ.ಎಚ್.ಡಿ. ಪದವಿಗಾಗಿ ಅಂಗೀಕರಿಸಿದೆ

ಬಾಬು:ಜಿಪಿಆರ್.

ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ.